ಅ) ಚಿಕ್ಕಬಳ್ಳಾಪುರ ತಾಲ್ಲೂಕು ದೊಡ್ಡಪೈಲಗುರ್ಕಿ ಗ್ರಾಮ ಪಂಚಾಯಿತಿಗೆ ಸೇರಿದ ಬೂದುಗುಂಡ್ಲು ಕೆರೆಯ ಶಂಕು ಸ್ಥಾಪನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಸದರಿ ಬೂದುಗುಂಡ್ಲು ಕೆರೆಯ ಅಭಿವೃದ್ಧಿಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ಬೂದುಗುಂಡ್ಲು ಕೆರೆಯ ಅಭಿವೃದ್ಧಿಯಿಂದ ನೂರಾರು ರೈತರಿಗೆ ಅನುಕೂಲವಾಗುವುದರಿಂದ ಸರ್ಕಾರ ಕೆರೆಯ ಅಭಿವೃದ್ಧಿಗೆ ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಡಾ. ಹೆಚ್. ಸಿ. ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಹೌದು.

ಆ) ಈ ಹಿಂದೆ ಸಣ್ಣ ನೀರಾವರಿ ಇಲಾಖೆ ವತಿಯಿಂದ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ಸ್ವಲ್ಪ ಕೈಗೊಂಡಿದ್ದು, ಜಿಲ್ಲಾ ಪಂಚಾಯಿತಿಗೆ ವರ್ಗಾಯಿಸಿದ ನಂತರ ಅನುದಾನದ ಕೊರತೆಯಿಂದ ಕೆರೆಯ ಅಭಿವೃದ್ಧಿ ಕಾರ್ಯವನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ 2005–06ನೇ ಸಾಲಿನ ಜಿಲ್ಲಾ ಪಂಚಾಯಿತಿಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಿ ಅನುದಾನದ ಲಭ್ಯತೆಗನುಗುಣವಾಗಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು.

ಇ) 2005–06ನೇ ಸಾಲಿನ ಜಿಲ್ಲಾ ಪಂಚಾಯಿತಿಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಿ ಅನುದಾನದ ಲಭ್ಯತೆಗನುಸಾರ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು.

2340(2790) ಶ್ರೀ ನರಸಿಂಹಸ್ವಾಮಿ. ಜೆ. (ದೊಡ್ಡಬಳ್ಳಾಪುರ):– ಮಾನ್ಯ ಪೌರಾಡಳಿತ ಮತ್ತು ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದೊಡ್ಡಬಳ್ಳಾಪುರ ಟೌನ್‌ನಲ್ಲಿ ಕುಡಿಯುವ ನೀರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದುವರೆವಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಿಂದ ದೊಡ್ಡಬಳ್ಳಾಪುರ ನಗರಸಭೆಗೆ ಕುಡಿಯುವ ನೀರಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

ಇ) ಇನ್ನು ಮುಂದಿನ ಎರಡು ತಿಂಗಳುಗಳಿಗೆ ಕುಡಿಯುವ ನೀರಿನ ಕೊರತೆ ನಿವಾರಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಮತ್ತು ಕೆ.ಯು.ಐ.ಡಿ.ಎಫ್.ಸಿ. ಸಚಿವರು)

ಅ) ಬಂದಿದೆ

ಆ) ರೂ. 2.00 ಲಕ್ಷಗಳು

ಇ) ಪಟ್ಟಣದ ಕುಡಿಯುವ ನೀರಿನ ಅಭಾವ ನೀಗಿಸಲು ವಿವಿಧ ಬಡಾವಣೆಗಳಲ್ಲಿ ಕೊಳವೆಬಾವಿ ಕೊರೆಯುವುದು, ಪಂಪ್ ಅಳವಡಿಸುವುದು ಹಾಗೂ ಪೈಪ್‌ಲೈನ್ ಹಾಕುವ ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು ಇದಕ್ಕಾಗಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ರೂ. 31.89 ಲಕ್ಷಗಳನ್ನು ಬಿಡುಗಡೆಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

2341(3100) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು ಅದರಲ್ಲೂ ಮುಖ್ಯವಾಗಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವ್ಯಾಪಕವಾಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಇದನ್ನು ತಡೆ ಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಗಣಿ ಗುತ್ತಿಗೆ ಪ್ರದೇಶಗಳನ್ನು ಕಂದಾಯ, ಅರಣ್ಯ ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಜಂಟಿ ಮೋಜಣಿ ಮಾಡಿ, ಗಣಿಗುತ್ತಿಗೆ ಪ್ರದೇಶದ ಗಡಿಗಳನ್ನು ಗುರ್ತಿಸಿ ಗಣಿಗುತ್ತಿಗೆದಾರರ ನಾಮಫಲಕಗಳನ್ನು ನೆಡಿಸಲಾಗಿದೆ. ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದ್ದವರ ಮೇಲೆ ಎಂ & ಎಂ (ಡಿ & ಆರ್) ಕಾಯ್ದೆ, 1957ರ ಪ್ರಕಾರ ದಂಡ ವಿಧಿಸಿ ರೂ. 3,84,600.00ಗಳನ್ನು ವಸೂಲಿ ಮಾಡಲಾಗಿದೆ ಅಕ್ರಮ ಗಣಿಗಾರಿಕೆಯಿಂದ ದಾಸ್ತಾನು ಮಾಡಿದ್ದ ಖನಿಜವನ್ನು ವಶಪಡಿಸಿಕೊಂಡು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

2342(3101) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್):– ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದೂರ ಪ್ರಯಾಣದ ಬಸ್‌ಗಳಲ್ಲಿ ಶೌಚಾಲಯವಿಲ್ಲದೆ ಪ್ರಕೃತಿ ಕರೆಗೆ (ಬಹಿರ್ದೆಶೆಗೆ) ಪ್ರಯಾಣೀಕರು ಪರದಾಡುವ ದೃಶ್ಯ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಶೌಚಾಲಯ ನಿರ್ಮಿಸಲು ಸರ್ಕಾರ ಕ್ರಮಕೈಗೊಳ್ಳುವುದೆ:

ಇ) ಯಾವ ಅವಧಿಯೊಳಗಾಗಿ ಶೌಚಾಲಯಗಳನ್ನು ನಿರ್ಮಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.